(ತಿದ್ದುಪಡಿ) ವಿಧೇಯಕ, 1997

ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-I

ಶ್ರೀ ಎಂ.ಪಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "1997ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವನೆ ಏನೆಂದರೆ,

"1997ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ.ಪಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ.*

(ಆ) ಕರ್ನಾಟಕ ಕರಾರು ವಾಹನಗಳ (ಆರ್ಜನೆ) ತಿದ್ದುಪಡಿ)

ವಿಧೇಯಕ, 1997

ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-II

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997 ರ ಕರ್ನಾಟಕ ಕರಾರು ವಾಹನಗಳ (ಆರ್ಜನೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"1997ರ ಕರ್ನಾಟಕ ಕರಾರು ವಾಹನಗಳ (ಆರ್ಜನೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ 1997ರ ಕರ್ನಾಟಕ ಕರಾರು ವಾಹನಗಳ (ಆರ್ಜನೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:*ವಿಧೇಯಕವನ್ನು ಮಂಡಿಸಲಾಗಿದೆ.*

(ಇ) ಕರ್ನಾಟಕ ರೇಷ್ಮೆ ಹುಳುತಳಿ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 1997 ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-III

ಶ್ರೀ ಎಂ. ವರದೇಗೌಡ (ರೇಷ್ಮೆ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997 ರ ಕರ್ನಾಟಕ ರೇಷ್ಮೆ ಹುಳುತಳಿ, ರೇಷೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"1997ರ ಕರ್ನಾಟಕ ರೇಷ್ಮೆ ಹುಳು, ರೇಷ್ಮೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ವರದೇಗೌಡ (ರೇಷ್ಮೆ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ರೇಷ್ಮೆ ಹುಳು, ರೇಷ್ಮೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ.*